70

# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:-** 2020-21ನೇ ಸಾಲಿನ ಜನವರಿ 2021ರಿಂದ ಮಾರ್ಚ್ 2021ರವರೆಗಿನ ನಾಲ್ಕನೇ ತ್ರೈಮಾಸಿಕ ಕಂತಿನ ಶಾಸನಬದ್ಧ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 129 ಗ್ರಾಪಂಕಾ 2002(3), ದಿನಾಂಕ:02-12-2003.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 234 ಗ್ರಾಪಂಅ2007, ದಿನಾಂಕ:27-03-2008
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 10 ಗ್ರಾಪಸ 2015, ದಿನಾಂಕ:10-03-2015.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 252 ಗ್ರಾಪಂಅ 2016, ದಿನಾಂಕ:23-03-2016.
5. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 74 ಗ್ರಾಪಂಸಿ 2017 (ಭಾಗ-1) ಬೆಂಗಳೂರು, ದಿನಾಂಕ:02-03-2018.
6. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 74 ಗ್ರಾಪಂಸಿ 2017 (ಭಾಗ-1) ಬೆಂಗಳೂರು, ದಿನಾಂಕ:12-03-2018.
7. ಆರ್ಥಿಕ ಇಲಾಖೆ ಆದೇಶ ಸಂಖ್ಯೆ:ಎಫ್‌ಡಿ 2 ಟಿಎಫ್‌ಪಿ 2020, ದಿನಾಂಕ:01-04-2020.
8. ಆರ್ಥಿಕ ಇಲಾಖೆ ಆದೇಶ ಸಂಖ್ಯೆ: ಎಫ್‌ಡಿ 4 ಟಿಎಫ್‌ಪಿ 2020, ದಿನಾಂಕ:27-10-2020.
9. ಸರ್ಕಾರದ ಆದೇಶ ಸಂಖ್ಯೆ:ಕಪಂರಾಆ:ಅಭಿವೃದ್ಧಿ:95:2020 ದಿನಾಂಕ:25.11.2020
10. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 4 ಟಿಎಫ್‌ಪಿ 2020, ದಿನಾಂಕ: 24.11.2020.

**********

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(7)ರ ಸರ್ಕಾರದ ಆದೇಶದಲ್ಲಿ 2020-21ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 2515-00-198-1-07-300ರ ಅಡಿಯಲ್ಲಿ "ಗ್ರಾಮ ಪಂಚಾಯಿತಿಗಳಿಗೆ ಸಹಾಯ"ಎಂಬ ಹೆಸರಿನಲ್ಲಿ ಒಟ್ಟು ರೂ.902,99,00,000/- (ರೂಪಾಯಿ ಒಂಭೈನೂರಾ ಎರಡು ಕೋಟಿ ತೊಂಬತ್ತೊಂಬತ್ತು ಲಕ್ಷಗಳು ಮಾತ್ರ) ಒದಗಿಸಿದ್ದು, ಈ ಪೈಕಿ ವಾರ್ಷಿಕವಾಗಿ ರೂ.652,99,00,000/- (ರೂಪಾಯಿ ಆರು ನೂರಾ ಐವತ್ತೆರಡು ಕೋಟಿ ತೊಂಬತ್ತೊಂಬತ್ತು ಲಕ್ಷಗಳು ಮಾತ್ರ) ಶಾಸನಬದ್ಧ ಅನುದಾನವಾಗಿದ್ದು, ಇದರ ಶೇ.60ರಷ್ಟನ್ನು ಗ್ರಾಮ ಪಂಚಾಯತಿಗಳ ವಿದ್ಯುತ್ ಬಿಲ್ ಮೊತ್ತ ಭರಿಸಲು ರೂ.391,79,40,000/- (ರೂಪಾಯಿ ಮುನ್ನೂರಾ ತೊಂಬತ್ತೊಂದು ಕೋಟಿ ಎಪ್ಪತ್ತೊಂಬತ್ತು ಲಕ್ಷದ ನಲವತ್ತು ಸಾವಿರ ಮಾತ್ರ) ಹಾಗೂ ಶೇ.40ರಷ್ಟು ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಪಾವತಿ ಮಾಡಲು ರೂ.261,19,60,000/- (ರೂಪಾಯಿ ಎರಡುನೂರ ಅರವತ್ತೊಂದು ಕೋಟಿ ಹತ್ತೊಂಬತ್ತು ಲಕ್ಷದ ಅರವತ್ತು ಸಾವಿರ ಮಾತ್ರ) ಮತ್ತು ಅದೇ ಉದ್ದೇಶಕ್ಕೆ ಕೊರತೆಯಾಗುವುದರಿಂದ ಆರ್ಥಿಕ ಇಲಾಖೆಯು ವೇತನಕ್ಕಾಗಿ ಒದಗಿಸಿದ ರೂ.250,00,00,000/- (ರೂಪಾಯಿ ಎರಡುನೂರ ಐವತ್ತು ಕೋಟಿಗಳು ಮಾತ್ರ)ಗಳಂತೆ ಹಂಚಿಕೆ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(10)ರ ದಿನಾಂಕ:24.11.2020ರ ಸರ್ಕಾರದ ಆದೇಶದಲ್ಲಿ ಮಾಡಲಾದ ಹಣ ಬಿಡುಗಡೆ ಆರ್ಥಿಕ ಪ್ರತ್ಯಾಯೋಜನೆಯಂತೆ ಮಾರ್ಚ್ 2021ರವರೆಗಿನ ಅನುದಾನವನ್ನು ಬಿಡುಗಡೆಗೊಳಿಸಲು ಅನುಮತಿ ನೀಡಿರುವ ಹಿನ್ನೆಲೆಯಲ್ಲಿ 2020-21ನೇ ಸಾಲಿನ ಜನವರಿ 2021ರಿಂದ ಮಾರ್ಚ್ 2020ರ ತಿಂಗಳುಗಳ ನಾಲ್ಕನೇ ತ್ರೈಮಾಸಿಕ ಕಂತಿನ ಶಾಸನಬದ್ಧ ಅನುದಾನವನ್ನು ಬಿಡುಗಡೆ ಮಾಡಬಹುದಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(9)ರಂತೆ ಮೂರನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡಲಾದ ಮಾದರಿಯಲ್ಲೇ, ಅಂದರೆ ರಾಜ್ಯದ 6009 ಗ್ರಾಮ ಪಂಚಾಯತಿಗಳಿಗೆ ಶೇ.40ರ ಅನುಪಾತದ ಶಾಸನಬದ್ಧ ಅನುದಾನದಡಿ ವೇತನ ಪಾವತಿಗಾಗಿ ಲಭ್ಯವಿರುವ ಅನುದಾನವನ್ನು ಹಾಗೂ ವಾರ್ಷಿಕವಾಗಿ ರೂ.50.00ಲಕ್ಷಕ್ಕಿಂತ ಹೆಚ್ಚಿನ ಆದಾಯ ಹೊಂದಿರುವ ರಾಜ್ಯದ 151 ಗ್ರಾಮ ಪಂಚಾಯತಿಗಳು ತಮ್ಮಲ್ಲಿ ಲಭ್ಯವಿರುವ ಸ್ವಂತ ಸಂಪನ್ಮೂಲದಲ್ಲಿ ತನ್ನ ಸಿಬ್ಬಂದಿಗಳಿಗೆ ವೇತನ ಪಾವತಿಸಬಹುದಾದ ಹಿನ್ನೆಲೆಯಲ್ಲಿ, ಇವುಗಳನ್ನು ಹೊರತುಪಡಿಸಿ, ಉಳಿದ 5858 ಗ್ರಾಮ ಪಂಚಾಯತಿಗಳಿಗೆ ಮಾತ್ರ ಆರ್ಥಿಕ ಇಲಾಖೆಯು ವೇತನಕ್ಕಾಗಿ ಒದಗಿಸಿದ ಅನುದಾನವನ್ನು ಬಿಡುಗಡೆ ಮಾಡಬಹುದಾಗಿರುತ್ತದೆ.

ರಾಜ್ಯದ 9 ಗ್ರಾಮ ಪಂಚಾಯತಿಗಳು ನಗರಸಭೆ/ ಪುರಸಭೆಗಳಾಗಿ ಸೇರ್ಪಡೆಗೊಂಡಿರುವುದರಿಂದ ಅವುಗಳಿಗೆ ವಾರ್ಷಿಕವಾಗಿ ಬಿಡುಗಡೆಗೊಳಿಸಲಾಗುತ್ತಿದ್ದ ಎಸ್ಕ್ರೋ ಅನುದಾನ ರೂ:9,53,40,000/ (ರೂಪಾಯಿ ಒಂಬತ್ತು ಕೋಟಿ ಐವತ್ತಮೂರು ಲಕ್ಷದ ನಲವತ್ತು ಸಾವಿರಗಳು ಮಾತ್ರ) ಉಳಿದುಕೊಳ್ಳಲಿದ್ದು, ಈ ಅನುದಾನವನ್ನು ಇತರೆ 6009 ಗ್ರಾಮ ಪಂಚಾಯತಿಗಳಿಗೆ ಸಮಾನವಾಗಿ ಹಂಚಿಕೆ ಮಾಡಿ ಬಿಡುಗಡೆ ಮಾಡಬಹುದಾಗಿದೆ.

ಅದರಂತೆ, ದಿನಾಂಕ:02-01-2021ರಂದು ಎನ್‌ಐಸಿಯಿಂದ ಸ್ವೀಕೃತವಾದ ಪಂಚತಂತ್ರ ಆಧಾರಿತ ಮಾಹಿತಿಯಂತೆ ಒಟ್ಟು 51,750 ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಬೇಡಿಕೆ ತ್ರೈಮಾಸಿಕವಾಗಿ ರೂ:199,62,75,756/-ಗಳಾಗಲಿದ್ದು, ಈ ಪೈಕಿ ಶಾಸನಬದ್ಧ ಅನುದಾನದಡಿ ಅನುದಾನದ ಕೊರತೆಯಿರುವುದರಿಂದ, ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಏಕರೂಪ ವೇತನ ಅನುದಾನ ಹಂಚಿಕೆ ಮಾಡುವ ಹಿತದೃಷ್ಟಿಯಿಂದ, ಸಿಬ್ಬಂದಿಗಳ ತ್ರೈಮಾಸಿಕ ವೇತನ ಪಾವತಿಗಾಗಿ ಪ್ರತಿ ಗ್ರಾಮ ಪಂಚಾಯತಿ ಬೇಡಿಕೆಯ ಒಟ್ಟಾರೆ ಅನುದಾನದಲ್ಲಿ ಸರಾಸರಿ ಸುಮಾರು ಶೇ.35ರಷ್ಟು ಕಡಿತಗೊಳಿಸಿ ಪ್ರಸ್ತುತ ರಾಜ್ಯದಲ್ಲಿನ ಒಟ್ಟು 6009 ಗ್ರಾಮ ಪಂಚಾಯಿತಿಗಳಿಗೆ ಶಾಸನಬದ್ಧ ಅನುದಾನದಡಿ ರೂ:65,29,90,000/-(ರೂಪಾಯಿ ಅರವತ್ತೈದು ಕೋಟಿ ಇಪ್ಪತ್ತೊಂಬತ್ತು ಲಕ್ಷದ ತೊಂಬತ್ತು ಸಾವಿರಗಳು ಮಾತ್ರ) ಮತ್ತು ಮೇಲೆ ವಿವರಿಸಿದಂತೆ 151 ಗ್ರಾಮ ಪಂಚಾಯತಿಗಳನ್ನು ಹೊರತುಪಡಿಸಿ 5858 ಗ್ರಾಮ ಪಂಚಾಯತಿಗಳಿಗೆ ಆರ್ಥಿಕ ಇಲಾಖೆಯು ವೇತನಕ್ಕಾಗಿ ಒದಗಿಸಿದ ಅನುದಾನ ರೂ.62,50,00,000/-(ರೂಪಾಯಿ ಅರವತ್ತೆರಡು ಕೋಟಿ ಐವತ್ತು ಲಕ್ಷಗಳು ಮಾತ್ರ)ಗಳಂತೆ ಒಟ್ಟು ರೂ.127,79,90,000/-(ನೂರಾ ಇಪ್ಪತ್ತೇಳು ಕೋಟಿ ಎಪ್ಪತ್ತೊಂಬತ್ತು ಲಕ್ಷದ ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಗ್ರಾಮ ಪಂಚಾಯತಿಗಳ ವಿದ್ಯುತ್ ಬಿಲ್ಲು ಪಾವತಿಗಾಗಿ ರೂ:97,94,85,000/-(ರೂಪಾಯಿ ತೊಂಬತ್ತೇಳು ಕೋಟಿ ತೊಂಬತ್ತನಾಲ್ಕು ಲಕ್ಷದ ಎಂಬತ್ತೈದು ಸಾವಿರ ಮಾತ್ರ) ಸೇರಿದಂತೆ ಒಟ್ಟು ರೂ:225,74,75,000/-(ಇನ್ನೂರಾ ಇಪ್ಪತ್ತೈದು

ಕೋಟಿ ಎಪ್ಪತ್ನಾಲ್ಕು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೆಪಿಆರ್‌ಸಿ ಅಭಿವೃದ್ಧಿ 95/2020, ಬೆಂಗಳೂರು- ದಿನಾಂಕ:29.01.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2020-21ನೇ ಸಾಲಿನ ಶಾಸನಬದ್ಧ ಅನುದಾನದ ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನದ ಮೊತ್ತ ರೂ.225,74,75,000/- (ಇನ್ನೂರಾ ಇಪ್ಪತ್ತೈದು ಕೋಟಿ ಎಪ್ಪತ್ನಾಲ್ಕು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ), ಲೆಕ್ಕ ಶೀರ್ಷಿಕೆ 2515-00-198-1-07-300 ಅಡಿಯಲ್ಲಿ ಭರಿಸಿ, 6009 ಗ್ರಾಮ ಪಂಚಾಯತಿಗಳಿಗೆ ಅನುಬಂಧ-1 ಮತ್ತು ಅನುಬಂಧ-2ರಲ್ಲಿರುವಂತೆ ಉಳಿತಾಯ ಖಾತೆ ಸಂಖ್ಯೆ **64062923099** ಇದರ ಮೂಲಕ ಬಿಡುಗಡೆಗೊಳಿಸುವಂತೆ ವ್ಯವಸ್ಥಾಪಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಧಾನಸೌಧ ಶಾಖೆ, ಬೆಂಗಳೂರು-560001 ಇವರಿಗೆ ತಿಳಿಸಿ ಆದೇಶಿಸಿದೆ.

ಅನುಬಂಧ-3ರಲ್ಲಿನ ಗ್ರಾಮ ಪಂಚಾಯತಿಗಳು ವಾರ್ಷಿಕವಾಗಿ ರೂ.50.00ಲಕ್ಷಕ್ಕೂ ಹೆಚ್ಚು ಆದಾಯ ಗಳಿಸುವ ಸ್ವಂತ ಸಂಪನ್ಮೂಲವನ್ನು ಹೊಂದಿರುವ ಹಿನ್ನೆಲೆಯಲ್ಲಿ ಸದರಿ ಗ್ರಾಮ ಪಂಚಾಯತಿಗಳು ತಮ್ಮ ಸ್ವಂತ ಅನುದಾನದಿಂದ ಸಿಬ್ಬಂದಿಗಳ ವೇತನವನ್ನು ಪಾವತಿಸುವಂತೆ ಹಾಗೂ ವಿದ್ಯುತ್ ಬಿಲ್ಲು ಪಾವತಿಗಾಗಿ ಬಿಡುಗಡೆಗೊಳಿಸುವ ಎಸ್ಕ್ರೋ ಅನುದಾನವನ್ನು ವಿದ್ಯುತ್ ಬಿಲ್ಲು ಪಾವತಿಸಲು ಬಳಸಿಕೊಂಡು, ಉಳಿದ ಹಣವನ್ನು ಇತರೆ ಅಭಿವೃದ್ಧಿ ಕಾರ್ಯಗಳಿಗಾಗಿ ಬಳಸಿಕೊಳ್ಳಬಹುದೆಂದು ಆದೇಶಿಸಿದೆ.

ಮೇಲ್ಕಂಡ ಉದ್ದೇಶಗಳಿಗಲ್ಲದೇ ಈ ಅನುದಾನವನ್ನು ಗ್ರಾಮ ಪಂಚಾಯಿತಿಗಳು ಬೇರೆ ಯಾವುದೇ ಉದ್ದೇಶಕ್ಕೆ ವಿನಿಯೋಗಿಸತಕ್ಕದ್ದಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2019, ದಿನಾಂಕ:03.04.2019, ಎಫ್‌ಡಿ 2 ಟಿಎಫ್‌ಪಿ 2020, ದಿನಾಂಕ:30-05-2020, ಎಫ್.ಡಿ 4 ಟಿಎಫ್‌ಪಿ, ದಿನಾಂಕ:27-10-2020 ಮತ್ತು ದಿನಾಂಕ:24.11.2020ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 29/01/21
**(ನವೀನ್ ಕುಮಾರ್.ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
29/1/2021

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ನಿರ್ದೇಶಕರು, ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
5. ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-01
7. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುಚ್ಛಕ್ತಿ ಕಂಪನಿ, ಕೆ.ಆರ್.ವೃತ್ತ, ಬೆಂಗಳೂರು-01.
8. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುಚ್ಛಕ್ತಿ ಕಂಪನಿ, ಪಿ.ಬಿ.ರಸ್ತೆ, ನವನಗರ, ಹುಬ್ಬಳ್ಳಿ-580029.

9. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗ ವಿದ್ಯುಚ್ಛಕ್ತಿ ಕಂಪನಿ, ಸ್ಟೇಷನ್‌ರಸ್ತೆ, ಗುಲ್ಬರ್ಗ-585101.
10. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುಚ್ಛಕ್ತಿ ಕಂಪನಿ, ಎ.ಬಿ.ಶೆಟ್ಟಿ ವೃತ್ತ, ಮಂಗಳೂರು-575001.
11. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಕಂಪನಿ, ನಂ.29, ವಿಜಯನಗರ 2ನೇ ಹಂತ, ಹಿನ್ಕಲ್, ಮೈಸೂರು- 570017.
12. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳು (ಆಯಾ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ.)
13. ವ್ಯವಸ್ಥಾಪಕರು, ಭಾರತೀಯ ಸ್ಟೇಟ್‌ಬ್ಯಾಂಕ್, ವಿಧಾನಸೌಧ ಶಾಖೆ, ಬೆಂಗಳೂರು-01- ಇವರಿಗೆ ಅಗತ್ಯಕ್ರಮಕ್ಕಾಗಿ.
14. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
15. ಮಾಹಿತಿ ಕೇಂದ್ರ/ ವೆಬ್‌ಸೈಟ್, ಗ್ರಾಅಪ ಇಲಾಖೆ.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
4. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಮಾಹಿತಿಗಾಗಿ.
5. ನಿರ್ದೇಶಕರು, (ಪಂಚಾಯತ್ ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಮಾಹಿತಿಗಾಗಿ.
6. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
8. ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ಹೆಚ್ಚುವರಿ ಪ್ರತಿ ಶಾಖಾ ರಕ್ಷಾಕಡತಕ್ಕೆ.